# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 580(670)**
**ಸದಸ್ಯರ ಹೆಸರು : ಶ್ರೀ ಸಿ.ಎನ್ ಮಂಜೇಗೌಡ**
**ಉತ್ತರಿಸಬೇಕಾದ ದಿನಾಂಕ : 09.03.2026**
**ಉತ್ತರಿಸುವ ಸಚಿವರು : ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಸುಮಾರು 29 ಸಾವಿರ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ದಶಕಗಳಿಂದ ಯಶಸ್ವಿಯಾಗಿ ನಡೆಯುತ್ತಿದ್ದ 'ನಲಿ-ಕಲಿ' ಯೋಜನೆಯನ್ನು ಮುಂಬರುವ ಶೈಕ್ಷಣಿಕ ಸಾಲಿನಿಂದ ರದ್ದುಗೊಳಿಸಲು ಸರ್ಕಾರ ತೀರ್ಮಾನಿಸಿರುವುದು ನಿಜವೇ; | ಸರ್ಕಾರಿ ಪ್ರಾಥಮಿಕ ಶಾಲೆಗಳ ದಾಖಲಾತಿಯಲ್ಲಿ ಗಣನೀಯ ಇಳಿಕೆ ಕಂಡುಬಂದಿರುತ್ತದೆ.<br>ಸುಮಾರು 7000 ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಲಾಗಿದ್ದು, ಸದರಿ ತರಗತಿಗಳಿಗೆ ಏಕತರಗತಿ ಬೋಧನಾ ಪದ್ಧತಿಯನ್ನು ಅಳವಡಿಸಿಕೊಳ್ಳಲಾಗಿದೆ. ಸದರಿ ವಿದ್ಯಾರ್ಥಿಗಳು ಏಕ ತರಗತಿ ಪದ್ಧತಿಯಿಂದ ಬಹುವರ್ಗ ಬೋಧನಾ ಪದ್ಧತಿ ಹೊಂದಿರುವ ಪ್ರಾಥಮಿಕ ತರಗತಿಗಳಿಗೆ ಸೇರಲು ಹಿಂಜರಿಯುತ್ತಿರುವುದನ್ನು ಗಮನಿಸಲಾಗಿದೆ. ಖಾಸಗಿ ಶಾಲೆಗಳು ಪ್ರಾಥಮಿಕ ತರಗತಿಗಳಿಗೆ ಬಹುವರ್ಗ ಬೋಧನಾ ಪದ್ಧತಿ ಹೊಂದಿರುವುದಿಲ್ಲ.<br><br>ಪೋಷಕರು ತಮ್ಮ ಮಕ್ಕಳನ್ನು ಏಕ ತರಗತಿ ಬೋಧನೆಗೆ ಒಳಪಡಿಸಲು ಇಚ್ಛಿಸುತ್ತಿರುವುದರಿಂದ ಹಾಗೂ ಇಂದಿನ ಸನ್ನಿವೇಶಕ್ಕೆ ಬಹುವರ್ಗ ಕಲಿಕಾ ವಿಧಾನವು ತನ್ನ ಪ್ರಸ್ತುತತೆಯನ್ನು ಕಳೆದುಕೊಂಡಿರುವುದರಿಂದ ಪ್ರಸ್ತುತ ಸ್ಪರ್ಧಾತ್ಮಕ ಅವಶ್ಯಕತೆಗಳಿಗೆ ಅನುಗುಣವಾಗಿ ಬೋಧನಾ ಕಲಿಕಾ ವಿಧಾನವನ್ನು ಪರಿಷ್ಕರಿಸುವ ಅಗತ್ಯತೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಮತ್ತು ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಏಕರೂಪದ ಶೈಕ್ಷಣಿಕ ಮತ್ತು ಆಡಳಿತಾತ್ಮಕ ವ್ಯವಸ್ಥೆಯನ್ನು ಜಾರಿಗೊಳಿಸಲು 2026-27ನೇ ಸಾಲಿನಿಂದ ಮೊದಲ ಹಂತದಲ್ಲಿ ರಾಜ್ಯದ ಎಲ್ಲಾ ಕೆ.ಪಿ.ಎಸ್, ಪಿ.ಎಂ.ಶ್ರೀ ಶಾಲೆಗಳು ಮತ್ತು ಆಯ್ದ 15 ಜಿಲ್ಲೆಗಳ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ನಲಿಕಲಿ ಕಲಿಕಾ ವಿಧಾನದ ಬದಲು 01 ರಿಂದ 05ನೇ ತರಗತಿವರೆಗೆ ದ್ವಿಭಾಷಾ ಏಕ ತರಗತಿ ಪಠ್ಯ ಪುಸ್ತಕ ಆಧಾರಿತ ಬೋಧನಾ ಕಲಿಕಾ ಪದ್ಧತಿಯನ್ನು ಅಳವಡಿಸಲಾಗುತ್ತಿದೆ. ಈ ಶಾಲೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಶಾಲೆಗಳಲ್ಲಿ 2026-27ನೇ ಸಾಲಿಗೆ ನಲಿ-ಕಲಿ ಕಾರ್ಯಕ್ರಮವನ್ನು ಮುಂದುವರೆಸಲಾಗುತ್ತಿದೆ. |
| ಆ | ಈ ಯೋಜನೆಯನ್ನು ರದ್ದುಗೊಳಿಸಲು ಶಿಕ್ಷಕರ ಮೇಲಿನ ಕೆಲಸದ ಒತ್ತಡವೇ ಮುಖ್ಯ ಕಾರಣವೆಂದು ಹೇಳಲಾಗುತ್ತಿದ್ದು, ಗುಣಮಟ್ಟದ ಶಿಕ್ಷಣ ನೀಡುವ ಈ ಮನೋವೈಜ್ಞಾನಿಕ ಕಲಿಕಾ ಕ್ರಮಕ್ಕೆ | 2026-27ನೇ ಸಾಲಿನಿಂದ ಮೊದಲ ಹಂತದಲ್ಲಿ ರಾಜ್ಯದ ಎಲ್ಲಾ ಕೆ.ಪಿ.ಎಸ್, ಪಿ.ಎಂ.ಶ್ರೀ ಶಾಲೆಗಳು ಮತ್ತು ಆಯ್ದ 15 ಜಿಲ್ಲೆಗಳ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ನಲಿಕಲಿ ಕಲಿಕಾ ವಿಧಾನದ ಬದಲು 01 ರಿಂದ 05ನೇ ತರಗತಿವರೆಗೆ ದ್ವಿಭಾಷಾ ಏಕ ತರಗತಿ ಪಠ್ಯ ಪುಸ್ತಕ ಆಧಾರಿತ ಬೋಧನಾ ಕಲಿಕಾ ಪದ್ಧತಿಯನ್ನು ಅಳವಡಿಸಲಾಗುತ್ತಿದೆ. ಇವುಗಳನ್ನು ಹೊರತುಪಡಿಸಿ ಉಳಿದ ಸರ್ಕಾರಿ ಶಾಲೆಗಳಲ್ಲಿ ನಲಿಕಲಿ ಬೋಧನಾ ಪದ್ಧತಿಯನ್ನು ಮುಂದುವರೆಸಲಾಗಿದೆ. |

| | | |
|---|---|---|
| | ಪರ್ಯಾಯವಾಗಿ ಸರ್ಕಾರ ಯಾವ ಹೊಸ ಯೋಜನೆಯನ್ನು ರೂಪಿಸಿದೆ; | ರಾಜ್ಯದ 35 ಶೈಕ್ಷಣಿಕ ಜಿಲ್ಲೆಗಳಲ್ಲಿ 2018-19ನೇ ಸಾಲಿನಿಂದ 2025-26 ನೇ ಸಾಲಿನವರೆಗೆ ವಿವಿಧ ಹಂತಗಳಲ್ಲಿ 9522 ಸರ್ಕಾರಿ ಶಾಲೆಗಳಲ್ಲಿ 1 ರಿಂದ 5 ನೇ ತರಗತಿಗಳಿಗೆ ಪಠ್ಯಪುಸ್ತಕ ಆಧಾರಿತ ಏಕ ತರಗತಿ ಬೋಧನಾ ಪದ್ಧತಿಯನ್ನು ಅಳವಡಿಸಿಕೊಂಡಿದ್ದು, ಏಕರೂಪದ ಶಿಕ್ಷಣ ನೀಡುವ ಉದ್ದೇಶದಿಂದ 2026-27ನೇ ಶೈಕ್ಷಣಿಕ ಸಾಲಿನಲ್ಲಿ ಎಲ್ಲಾ ಕೆಪಿಎಸ್ ಗಳು, 585 ಪಿಎಂಶ್ರೀ ಶಾಲೆಗಳು ಮತ್ತು ಆಯ್ದ 15 ಜಿಲ್ಲೆಗಳ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಪಠ್ಯಪುಸ್ತಕ ಆಧಾರಿತ ಏಕತರಗತಿ ಬೋಧನಾ ಪದ್ಧತಿಯನ್ನು ಅಳವಡಿಸಿಕೊಳ್ಳಲಾಗುತ್ತಿದೆ. |
| ಇ | ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಈ ಯೋಜನೆ ರದ್ದತಿಗೆ ಆಕ್ಷೇಪ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಯೋಜನೆಯ ಲೋಪದೋಷಗಳನ್ನು ಸರಿಪಡಿಸಿ ಮುಂದುವರೆಸುವ ಬಗ್ಗೆ ಸರ್ಕಾರದ ನಿಲುವೇನು? | ಸರ್ಕಾರದ ಗಮನಕ್ಕೆ ಬಂದಿದೆ.<br><br>ಈಗಾಗಲೇ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿಯು ಶೇ.46 ರಿಂದ ಶೇ.38ಕ್ಕೆ ಕುಸಿದಿರುತ್ತದೆ.<br><br>2024 ರಲ್ಲಿ NCERTಯು ನಡೆಸಿದ PARAKH (Performance Assessment, Review and Analysis of Knowledge for Holistic development) RASHTRIYA SARVEKSHAN ವರದಿ ಹಾಗೂ 2024ರ ASER (Annual Status of Education Report) ವರದಿಯಲ್ಲಿ ವಿವರಿಸಿರುವಂತೆ ಕಿರಿಯ ಪ್ರಾಥಮಿಕ ತರಗತಿ ವಿದ್ಯಾರ್ಥಿಗಳ ಕಲಿಕಾ ಮಟ್ಟದಲ್ಲಿ ಕುಸಿತವನ್ನು ಕಾಣಬಹುದಾಗಿದೆ. ಪೋಷಕರು ತಮ್ಮ ಮಕ್ಕಳನ್ನು ಏಕ ತರಗತಿ ಬೋಧನೆಗೆ ಒಳಪಡಿಸಲು ಇಚ್ಛಿಸುತ್ತಿರುವುದರಿಂದ ಹಾಗೂ ಇಂದಿನ ಸನ್ನಿವೇಶಕ್ಕೆ ಬಹುವರ್ಗ ಕಲಿಕಾ ವಿಧಾನವು ತನ್ನ ಪ್ರಸ್ತುತತೆಯನ್ನು ಕಳೆದುಕೊಂಡಿರುವುದರಿಂದ ಮೊದಲ ಹಂತದಲ್ಲಿ 2026-27ನೇ ಸಾಲಿಗೆ ಆಯ್ದ ಸುಮಾರು 24300 ಸರ್ಕಾರಿ ಶಾಲೆಗಳಲ್ಲಿ ಮಾತ್ರ ಪಠ್ಯಪುಸ್ತಕ ಆಧಾರಿತ ದ್ವಿಭಾಷಾ ಏಕತರಗತಿ ಬೋಧನಾ ಪದ್ಧತಿಯನ್ನು ಅಳವಡಿಸಿಕೊಳ್ಳಲಾಗುತ್ತಿದ್ದು, ಉಳಿದ ಸರ್ಕಾರಿ ಶಾಲೆಗಳಲ್ಲಿ ನಲಿ ಕಲಿ ಬೋಧನಾ ಪದ್ಧತಿಯನ್ನು ಮುಂದುವರೆಸಲಾಗಿದೆ. |

**ಸಂಖ್ಯೆ:ಇಪಿ 19 ಎಂ.ಸಿ.ಡಿ 2026**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**